# ಗ್ರಾಪಂ ಹುದ್ದೆಗಳಿಗೆ ಶೀಘ್ರ ನೇಮಕಭಾಗ್ಯ

## ಪರಿಷತ್‌ಗೆ ಸಿಎಂ ಬೊಮ್ಮಾಯಿ ಭರವಸೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು 3-4 ತಿಂಗಳಲ್ಲಿ ಭರ್ತಿ ಮಾಡಿ, ಬಲ ತುಂಬಲಾಗುವುದು ಎಂದು ವಿಧಾನ ಪರಿಷತ್‌ಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಗುರುವಾರ ಭರವಸೆ ನೀಡಿದರು. ಗ್ರಾ.ಪಂ.ಗಳಿಗೆ 30ಕ್ಕೂ ಹೆಚ್ಚು ಇಲಾಖೆಗಳ ಸೇವೆ ಒದಗಿಸುವ ಅಧಿಕಾರ ನೀಡಿದ್ದು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳ 326 ಹುದ್ದೆಗಳ ಭರ್ತಿಗೆ



ಅನುಮತಿ ಕೋರಿದ ಪ್ರಸ್ತಾವನೆ ಆರ್ಥಿಕ ಇಲಾಖೆ ಮುಂದಿದೆ. ಕಾರ್ಯದರ್ಶಿ ಗ್ರೇಡ್ 1ರ 487 ಹುದ್ದೆಗಳ ನೇರ ನೇಮಕ, ಬಡ್ತಿ ಮುಖೇನ ತುಂಬಲು ಕ್ರಮವಹಿಸಲಾಗುವುದು. ಕಾರ್ಯದರ್ಶಿ ಗ್ರೇಡ್-2ರ 556 ಹುದ್ದೆಗಳು ಖಾಲಿ ಇವೆ. ಈ ಪೈಕಿ 343 ನೇರ ನೇಮಕ, ಮಿಕ್ಕ ಹುದ್ದೆಗಳನ್ನು ಹಾಲಿ ಸಿಬ್ಬಂದಿಗೆ ಬಡ್ತಿ ಮೂಲಕ ಭರ್ತಿ ಮಾಡಲಾಗುವುದು. ಹಾಗೆಯೇ ಎಸ್‌ಡಿಎ 625ರಲ್ಲಿ 124 ನೇರ ನೇಮಕ, ಉಳಿದವು ಬಡ್ತಿ ಮುಖೇನ ಭರ್ತಿಯಾಗಲಿವೆ. ಒಟ್ಟಾರೆ ಶೇ.90 ಹುದ್ದೆಗಳು ಮೂರ್ನಾಲ್ಕು ತಿಂಗಳಲ್ಲಿ ಭರ್ತಿಯಾಗಲಿವೆ. ಕಾಂಗ್ರೆಸ್‌ನ ಮಂಜುನಾಥ ಭಂಡಾರಿ ಕೇಳಿದ ಪ್ರಶ್ನೆಗೆ ಸಿಎಂ ಈ ಉತ್ತರ ನೀಡಿದರು.

ಪುಟ 4A

ವಿಜಯವಾಣಿ ನಂ.1

# ಗ್ರಾಪಂ ಹುದ್ದೆಗೆ ನೇಮಕಭಾಗ್ಯ

ಮೊದಲನೇ ಪುಟದಿಂದ..

ಗ್ರಾಪಂಗಳು ಉತ್ತಮ ಆಡಳಿತ, ಅಭಿವೃದ್ಧಿ ಕೆಲಸ ಮಾಡಲೆಂದು ಅಮೃತ ಗ್ರಾಪಂ ಯೋಜನೆಯಡಿ 750 ಗ್ರಾಪಂಗಳಿಗೆ ತಲಾ 25 ಲಕ್ಷ ರೂ. ಪ್ರೋತ್ಸಾಹಧನ ನೀಡಲಾಗುತ್ತಿದೆ. ಕಳೆದ ಆರ್ಥಿಕ ವರ್ಷದಲ್ಲಿ ಗ್ರಾಪಂಗಳು ಬಳಸಿಕೊಂಡಿದ್ದು, 2ನೇ ಹಂತದಲ್ಲಿ ಮತ್ತೆ 750 ಗ್ರಾಪಂಗಳಿಗೆ ತಲಾ 25 ಲಕ್ಷ ರೂ. ನೀಡಲಾಗುವುದು ಎಂದು ತಿಳಿಸಿದರು.

**ಸೀಮಾ ವರದಿ ನಿರೀಕ್ಷೆ:** ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ಜಿ.ಪಂ. ಹಾಗೂ ತಾ.ಪಂ. ಕ್ಷೇತ್ರಗಳ ಮರು ವಿಂಗಡಣೆ ನಿಟ್ಟಿನಲ್ಲಿ ಕಾರ್ಯಪ್ರವೃತ್ತವಾಗಿದ್ದು, ವರದಿ ಸಲ್ಲಿಸಿದ ನಂತರ ಪರಿಶೀಲಿಸಿ ಕ್ರಮವಹಿಸಲಾಗುವುದು ಎಂದು ಡಿ.ಎಸ್. ಅರುಣ್ ಮತ್ತೊಂದು ಪ್ರಶ್ನೆಗೆ ಬೊಮ್ಮಾಯಿ ಆಶ್ವಾಸನೆ ನೀಡಿದರು.

ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನೂ ಮಂಡಿಸಿದ್ದು, ವಾರ್ಷಿಕ ರಿಟರ್ನ್ ಸಲ್ಲಿಸುವಿಕೆ ಸಂಬಂಧ ಸ್ಪಷ್ಟತೆ ತರುವ ಉದ್ದೇಶ ಹೊಂದಲಾಗಿದೆ.

## ಗ್ರಾಮೀಣ ಕ್ರೀಡೆಗೆ ಉತ್ತೇಜನ

ಬಿಜೆಪಿಯ ಡಿ.ಎಸ್.ಅರುಣ್ ಪ್ರಶ್ನೆಗೆ ಬೊಮ್ಮಾಯಿ ಪ್ರತಿಕ್ರಿಯಿಸಿ, ಗ್ರಾಮೀಣ ಭಾಗದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಉತ್ತೇಜಿಸಲು ಕ್ರಮವಹಿಸಲಾಗಿದೆ. ಗ್ರಾಪಂನಿಂದ ಜಿಪಂ ಹಂತದಲ್ಲಿ ವಿವಿಧ ಪಂದ್ಯಾಟಗಳಿಗೆ ಆಯೋಜಿಸಲು ಸೂಚಿಸಲಾಗಿದೆ. ಮಳೆಗಾಲದ ನಂತರ ಈ ಸ್ಪರ್ಧೆಗಳು ನಡೆಯಲಿವೆ. ಇದಕ್ಕಾಗಿ ಗ್ರಾಪಂಗಳು ಸ್ವಂತ ಆದಾಯದಲ್ಲಿ ಶೇ.2 ಮೊತ್ತ ಮೀಸಲಿರಿಸಲು ತಿಳಿಸಿ, ವಿನಿಯೋಗಕ್ಕೆ ಮಾರ್ಗಸೂಚಿ ಹೊರಡಿಸಲಾಗಿದೆ ಎಂದರು.

Bengaluru Edition
Sep 16, 2022 Page No. 5
Powered by : eReleGo.com

# ಮೂರ್ನಾಲ್ಕು ತಿಂಗಳಲ್ಲಿ 'ಗ್ರಾಪಂ'ಗಳಲ್ಲಿ ಖಾಲಿ ಇರುವ ಶೇ.90ರಷ್ಟು ಹುದ್ದೆಗಳ ಭರ್ತಿ

## ಸಿಎಂ ಬೊಮ್ಮಾಯಿ



ಬೆಂಗಳೂರು, ಸೆ.15: ರಾಜ್ಯದ ಗ್ರಾಮ ಪಂಚಾಯತ್‌ಗಳಲ್ಲಿ ಖಾಲಿಯಿರುವ ಹುದ್ದೆಗಳಲ್ಲಿ ಕನಿಷ್ಠ ಶೇ.90ರಷ್ಟು ಹುದ್ದೆಗಳನ್ನು ಮುಂದಿನ ಮೂರ್ನಾಲ್ಕು ತಿಂಗಳಲ್ಲಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಗುರುವಾರ ವಿಧಾನ ಪರಿಷತ್ ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್ ಸದಸ್ಯ ಮಂಜುನಾಥ್ ಭಂಡಾರಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಿಎಂ, ಜನರಿಗೆ ಉತ್ತಮ ಆಡಳಿತವನ್ನು ನೀಡಲು ಅನುಕೂಲವಾಗುವಂತೆ ಖಾಲಿ ಇರುವ ಪಿಡಿಒಗಳ ಪೈಕಿ 326 ಪಿಡಿಒಗಳು, 635 ಗ್ರೇಡ್-1 ಕಾರ್ಯದರ್ಶಿಗಳು, 340 ಗ್ರೇಡ್-2 ಕಾರ್ಯದರ್ಶಿಗಳು, 625 ದ್ವಿತೀಯ ದರ್ಜೆ ಸಹಾಯಕರು ಸೇರಿದಂತೆ ವಿವಿಧ ಹುದ್ದೆಗಳನ್ನು 3-4 ತಿಂಗಳೊಳಗಾಗಿ ನೇಮಕ ಮಾಡಿಕೊಳ್ಳಲಾಗುವುದು ಹಾಗೂ ಇನ್ನು ಕೆಲವು ಹುದ್ದೆಗಳನ್ನು ಭಡ್ತಿ ಮೂಲಕ ತುಂಬಲಾಗುವುದು ಎಂದು ತಿಳಿಸಿದರು.

**ಅಮೃತ ಯೋಜನೆಯಡಿ ಆಯ್ಕೆ:** ರಾಜ್ಯದಲ್ಲಿ ಕುಡಿಯುವ ನೀರು, ಸ್ವಚ್ಛತೆ, ನವೀಕರಣ, ಗ್ರಂಥಾಲಯ ಸೇರಿದಂತೆ ಇನ್ನಿತರ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಿರುವ 750 ಗ್ರಾಮ ಪಂಚಾಯತ್‌ಗಳನ್ನು ಅಮೃತ ಗ್ರಾಪಂ ಯೋಜನೆಯಡಿ ಆಯ್ಕೆ ಮಾಡಿದ್ದು, ಪ್ರತಿಯೊಂದು 'ಗ್ರಾಪಂ'ಗೂ ತಲಾ 25 ಲಕ್ಷ ರೂ. ಅನುದಾನ ನೀಡಲಾಗಿದೆ. ಗ್ರಾಮ ಪಂಚಾಯತ್‌ಗಳ ಸಬಲೀಕರಣ ಮಾಡುವ ಮೂಲಕ ಅವುಗಳ ಮುಖಾಂತರ ಜನರಿಗೆ ಉತ್ತಮ ಆಡಳಿತ ನೀಡಬೇಕು ಎನ್ನುವುದು ಸರಕಾರದ ಉದ್ದೇಶ ಎಂದು ಅವರು ತಿಳಿಸಿದರು.

## ಗಾಂಧಿ ಗ್ರಾಮ ಪುರಸ್ಕಾರ

ಪರಿಶೀಲನೆಯಲ್ಲಿ 2020-21ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಗ್ರಾಮ ಪಂಚಾಯತ್‌ಗಳನ್ನು ಆಯ್ಕೆ ಮಾಡುವ ಪ್ರಸ್ತಾವ ಪರಿಶೀಲನೆಯಲ್ಲಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಿಳಿಸಿದರು. ವಿಧಾನ ಪರಿಷತ್‌ನ ಕಲಾಪದ ವೇಳೆ ವಿಧಾನ ಪರಿಷತ್‌ನ ಸದಸ್ಯ ಮಂಜುನಾಥ ಭಂಡಾರಿ ಅವರು ಶೂನ್ಯ ವೇಳೆಯಲ್ಲಿ ಮಂಡಿಸಿದ ಸೂಚನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, 2013-14ರಿಂದ ಉತ್ತಮವಾಗಿ ಕಾರ್ಯನಿರ್ವಹಿಸುವ ಗ್ರಾಮ ಪಂಚಾಯತ್‌ಗಳಿಗೆ ತಾಲೂಕಿಗೆ ಒಂದರಂತೆ ಗಾಂಧಿ ಗ್ರಾಮ ಪುರಸ್ಕಾರ ನೀಡುವ ಯೋಜನೆಯನ್ನು ಜಾರಿಗೊಳಿಸಲಾಗಿದೆ.

## ಸೀಮಾ ಆಯೋಗ ವರದಿ ಪರಿಶೀಲಿಸಿ ಪಂಚಾಯತ್ ಚುನಾವಣೆ

ಕ್ಷೇತ್ರ ಪುನರ್ ವಿಂಗಡಣೆ ಸಂಬಂಧ ರಚಿಸಿರುವ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ ವರದಿ ಸಲ್ಲಿಸಿದ ನಂತರ ಪರಿಶೀಲಿಸಿ ಜಿಪಂ ಮತ್ತು ತಾಪಂ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಗುರುವಾರ ವಿಧಾನ ಪರಿಷತ್ ಪ್ರಶ್ನೋತ್ತರ ಅವಧಿಯಲ್ಲಿ ಡಿ.ಎಸ್.ಅರುಣ್ ಕೇಳಿದ ಪ್ರಶ್ನೆಗೆ ಸಿಎಂ ಬೊಮ್ಮಾಯಿ ಅವರು ಉತ್ತರಿಸಿದರು.

## ಈ ವರ್ಷವೇ ರಾಜ್ಯದಲ್ಲಿ ಗ್ರಾಮೀಣ ಕ್ರೀಡಾಕೂಟ

ರಾಜ್ಯದಲ್ಲಿ ಈ ವರ್ಷ ಗ್ರಾಮೀಣ ಕ್ರೀಡಾಕೂಟ ನಡೆಸಲು ಸರಕಾರ ಮುಂದಾಗಿದೆ. ಗ್ರಾಪಂ, ತಾಪಂ, ಜಿಪಂ ಮತ್ತು ರಾಜ್ಯ ಮಟ್ಟದಲ್ಲಿ ಗ್ರಾಮೀಣ ಕ್ರೀಡಾಕೂಟಗಳನ್ನು ಆಯೋಜಿಸುವ ಮೂಲಕ ಗ್ರಾಮೀಣ ಪ್ರತಿಭೆಗಳನ್ನು ಬೆಳಕಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಿಳಿಸಿದರು.

## ಅಕ್ರಮ ಖಾತೆ ಜಂಟಿ ಆಯುಕ್ತರ ವಿರುದ್ಧ ಎಫ್‌ಐಆರ್

ಬೆಂಗಳೂರಿನ ದಕ್ಷಿಣ ತಾಲೂಕಿನ ಪುಟ್ಟೇನಹಳ್ಳಿ ಗ್ರಾಮದ ಸರ್ವೇ ನಂ.39ರಲ್ಲಿ ನಿವೇಶನಕ್ಕೆ ಅಕ್ರಮವಾಗಿ ಖಾತೆ ಮಾಡಿಕೊಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಜಂಟಿ ಆಯುಕ್ತ ಸೇರಿದಂತೆ ಹಲವು ಅಧಿಕಾರಿ, ನೌಕರರ ವಿರುದ್ಧ ದೋಷಾರೋಪಣ ಪಟ್ಟಿ ಸಲ್ಲಿಸಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು. ಆಗಿನ ಜಂಟಿ ಆಯುಕ್ತರು ನಿವೃತ್ತರಾಗಿದ್ದಾರೆ. ಆದರೂ ಅವರ ವಿರುದ್ಧ ವಿಚಾರಣೆ ನಡೆಯುತ್ತಿದ್ದು, ಕಾನೂನಿನಡಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.